ಸಹ ಸದಸ್ಯರು

ನಾಮಕರಣ ಮಾಡಿರುವುದಿಲ್ಲ

ಭೀಮಾ ಕುಡಿಯುವ ನೀರಿನ ಯೋಜನೆ

516 - ಶ್ರೀ ಕಮರೂಲ್ ಇಸ್ಲಾಮ್(ಗುಲ್ಬರ್ಗಾ) ಮಾನ್ಯ ನಗರಾಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಗುಲ್ಬರ್ಗಾ ನಗರದ ಎರಡನೇ ಹಂತದ ಭೀಮಾ ಕುಡಿಯುವ ನೀರಿನ ಯೋಜನೆಯ ಪ್ರಸ್ತಾವನೆಗೆ ಸಂಪುಟವು ಒಪ್ಪಿಗೆ ನೀಡಲಾಗಿದೆಯೇ?

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಪ್ರಾರಂಭಿಸುವುದಕ್ಕೆ ವಿಳಂಬವಾಗಿರಲು ಕಾರಣವೇನು?

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಶಾಂತಿನಗರ ಕ್ಷೇತ್ರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ.

1125-ಶ್ರೀಮತಿ ಡಿ.ಜಿ. ಹೇಮಾವತಿ (ಶಾಂತಿನಗರ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಸಾಮಾಜಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಂಘಟಿಸಲು ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡುವ ಪ್ರಸ್ತಾವನೆ ಇದೆಯೇ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು)

ಅ) ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಂದರಂತೆ ೮.೦೦ಲಕ್ಷ ರೂ.ಗಳ ವೆಚ್ಚದಲ್ಲಿ ಮಿನಿ ಅಂಬ್ಕೇಡರ್ ಭವನಗಳನ್ನು ಕಟ್ಟುವ ಯೋಜನೆ ಇದೆ.

ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿ ಸೂಕ್ತ ನಿವೇಶನ ದೊರೆತಾಗ ಮಿನಿ ಅಂಬ್ಕೇಡರ್ ಭವನದ ನಿರ್ಮಾಣವನ್ನು ಹಣದ ಲಭ್ಯತೆಯ ಮೇರೆಗೆ ಪರಿಶೀಲಿಸಲಾಗುವುದು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಂಭಾವನೆ

98-ಶ್ರೀ ಎ.ಟಿ.ರಾಮಸ್ವಾಮಿ (ಅರಕಲಗೂಡು) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿರುವ ಅಂಗನವಾಡಿ ಕ್ಷಾರ್ಯ ಕರ್ತೆಯರ ಮತ್ತು ಸಹಾಯಕಿಯರ ವೇತನವು ತುಂಬಾ ಕಡಿಮೆಯಾಗಿರುವುದು ನಿಜವೇ?